# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ದಾವಣಗೆರೆ ಜಿಲ್ಲೆ ಹೊನ್ನಾಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕಿನಲ್ಲಿ ಬರುವ ಹಿರೇಕಲ್ಮಠ ಕೆರೆಯನ್ನು ಅಭಿವೃದ್ಧಿಪಡಿಸುವ ರೂ.900.00 ಲಕ್ಷ ಮೊತ್ತದ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-** ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ:ಕನೀನಿ/ತಾಂತ್ರಿಕ/ಭದ್ರಾ/ಇತರೆ(ಭಾಗ-6)2020-21/2023 ದಿನಾಂಕ:02.08.2021.

******

**ಪ್ರಸ್ತಾವನೆ:-**

ಹೊನ್ನಾಳಿ ವಿಧಾನಸಭಾ ಕ್ಷೇತ್ರದ ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕಿನಲ್ಲಿ ಬರುವ ಹಿರೇಕಲ್ಮಠ ಕೆರೆಯನ್ನು ರೈತರ ಹಿತದೃಷ್ಠಿಯಿಂದ ಅಭಿವೃದ್ಧಿಪಡಿಸುವುದು ಅವಶ್ಯವಿರುವ ಹಿನ್ನೆಲೆಯಲ್ಲಿ ಸದರಿ ಕೆರೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲು, ಅಲ್ಲದೇ, ಹೊನ್ನಾಳಿ ತಾಲ್ಲೂಕಿನ ಹಿರೇಕಲ್ಮಠ (ತುಂಗಾ ಎಡನಾಲಾ ಬ್ಯಾಲೆನ್ಸಿಂಗ್ ಟ್ಯಾಂಕ್) ಕೆರೆಯನ್ನು ಸೌಂದರ್ಯೀಕರಣಗೊಳಿಸಲು ಅವಶ್ಯವಿರುವ ಕಾಮಗಾರಿಗಳಾದ ಚೈನ್‌ಲಿಂಕ್ ಬೇಲಿ ನಿರ್ಮಾಣ, ಹ್ಯಾಂಡ್ ರೈಲಿಂಗ್, ವಿದ್ಯುದೀಕರಣ, ಉದ್ಯಾನ ನಿರ್ಮಾಣ ಇತ್ಯಾದಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವುದು ಅವಶ್ಯವಿರುವ ಹಿನ್ನೆಲೆಯಲ್ಲಿ, ಸದರಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ಮಂಜೂರು ಮಾಡುವಂತೆ ಮಾನ್ಯ ಶಾಸಕರು, ಹೊನ್ನಾಳಿ ವಿಧಾನಸಭಾ ಕ್ಷೇತ್ರ ಇವರು ಕೋರಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಇವರು ಮೇಲೆ ಓದಲಾದ ಪತ್ರದಲ್ಲಿ ವರದಿ ಮಾಡಿರುತ್ತಾರೆ.

ಮುಂದುವರೆದು, ದಿನಾಂಕ:23.07.2021ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 96ನೇ ಸಭೆಯಲ್ಲಿ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಚರ್ಚೆಯ ನಂತರ ರೈತರ ಹಿತದೃಷ್ಟಿಯಿಂದ ಹಿರೇಕಲ್ಮಠ ಕೆರೆ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಕೊಳ್ಳುವ ರೂ.900.00 ಲಕ್ಷಗಳ ಪ್ರಸ್ತಾವನೆಗೆ ಮಂಡಳಿಯು ಅನುಮೋದನೆ ನೀಡಿ, ಈ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಸರ್ಕಾರಕ್ಕೆ ಶಿಫಾರಸು ಮಾಡಿರುತ್ತದೆ ಎಂದು ತಿಳಿಸುತ್ತಾ, ಸದರಿ ಕೆರೆಯ ಅಭಿವೃದ್ಧಿ ಕಾಮಗಾರಿಯ ರೂ.900.00 ಲಕ್ಷಗಳ ಅಂದಾಜು ಪಟ್ಟಿಗೆ ಅನುದಾನದೊಂದಿಗೆ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಜಸಂಇ 67 ಎಂಎಂಬಿ 2021,</u>**
**<u>ಬೆಂಗಳೂರು, ದಿನಾಂಕ:20.12.2021</u>**

ದಾವಣಗೆರೆ ಜಿಲ್ಲೆ, ಹೊನ್ನಾಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕಿನಲ್ಲಿ ಬರುವ ಹಿರೇಕಲ್ಮಠ ಕೆರೆಯನ್ನು ಅಭಿವೃದ್ಧಿಪಡಿಸುವ ಕಾಮಗಾರಿಯ ರೂ.900.00 ಲಕ್ಷ (ರೂಪಾಯಿ ಒಂಭೈನೂರು ಲಕ್ಷಗಳು ಮಾತ್ರ) ಮೊತ್ತದ

......2

ಅಂದಾಜು ಪಟ್ಟಿಗೆ, ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ನೀರಾವರಿ ನಿಗಮ ನಿಯಮಿತಕ್ಕೆ ಒದಗಿಸಲಾಗಿರುವ ಅನುದಾನದಲ್ಲಿಯೇ ಅವಶ್ಯಕ ಅನುದಾನವನ್ನು ಭರಿಸುವ ಷರತ್ತಿಗೊಳಪಡಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:FD 03 TFP 2020 ದಿನಾಂಕ:31.08.2020 ಹಾಗೂ FD 01 TFP 2021 ದಿನಾಂಕ:30.09.2021ಗಳನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Shubha K 20/12/2021

(ಶುಭಾ ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)(ಪ್ರ)
ಜಲಸಂಪನ್ಮೂಲ ಇಲಾಖೆ.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
6. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
8. ಸರ್ಕಾರದ ಕಾರ್ಯದರ್ಶಿ ಯವರ ಆಪ್ತ ಕಾರ್ಯದರ್ಶಿ,, ಜಲಸಂಪನ್ಮೂಲ ಇಲಾಖೆ.
9. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜ.ಸಂ. ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜಲಸಂಪನ್ಮೂಲ ಇಲಾಖೆ.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಟಪಾಲ್ / TAPPAL 28 DE